# <u>ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಧಾನ ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು, ತರೀಕೆರೆ.</u>

**<u>ಸಿ.ಸಿ.143/2024</u>**

<u>ಪಿರ್ಯಾದುದಾರರು</u> ಃ ಸರ್ಕಾರದ ಪರವಾಗಿ ತರೀಕೆರೆ ಪೊಲೀಸರಿಂದ

-ವಿರುದ್ದ-

<u>ಆರೋಪಿ/ತರು</u> ಃ ಮುರುಳಿ ಮತ್ತು ಇತರರು

<u>-ಃದೋಷಾರೋಪಣೆಃ-</u>

ಶ್ರೀ ವೈದ್ಯ ಶ್ರೀಕಾಂತ್, ಬಿ.ಎಸ್ಸಿ, ಎಲ್.ಎಲ್.ಬಿ., ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಧಾನ ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು, ತರೀಕೆರೆ ಆದ ನಾನು ಈ ಕೆಳಗೆ ಕಾಣಿಸಿರುವಃ

1. ಮುರುಳಿ ಬಿನ್ ಹನುಮಂತಪ್ಪ, 30 ವರ್ಷ, ಕೂಲಿ ಕೆಲಸ, ವಾಸಃ ಕನುಮನಹಟ್ಟಿ, ತರೀಕೆರೆ.
2. ಹನುಮಂತಪ್ಪ ಬಿನ್ ರಂಗಪ್ಪ, 65 ವರ್ಷ, ವ್ಯವಸಾಯ, ವಾಸಃಕನುಮನಹಟ್ಟಿ, ತರೀಕೆರೆ.
3. ಶ್ರೀಮತಿ ಗಾಯಿತ್ರಮ್ಮ ಕೋಂ ಹನುಮಂತಪ್ಪ, 60 ವರ್ಷ, ವ್ಯವಸಾಯ, ವಾಸಃಕನುಮನಹಟ್ಟಿ, ತರೀಕೆರೆ.

ಆದ ನಿಮ್ಮ ವಿರುದ್ಧ ಈ ಕೆಳಗಿನಂತೆ ಹೊರಿಸಿರುವ ದೋಷಾರೋಪಣೆ ಎಂದರೆಃ

ದಿಃ09.09.2023 ರಂದು ಬೆಳಿಗ್ಗೆ 8-30 ರ ಸಮಯದಲ್ಲಿ ತರೀಕೆರೆ ಪೊಲೀಸ್ ಠಾಣಾ ಸರಹದ್ದಿನ ತರೀಕೆರೆ ಪಟ್ಟಣದ ಚಾಸಾ-1 ರವರಿಗೆ 1 ನೇ ಆರೋಪಿಯಾದ ನೀವು ವರದಕ್ಷಿಣೆ ವಿಚಾರವಾಗಿ ಜಗಳ ತೆಗೆದು ಅವಾಚ್ಯವಾಗಿ ಬೈದಿದ್ದು ಅಲ್ಲದೇ 2 ಮತ್ತು 3 ನೇ ಆರೋಪಿತರಾದ ನೀವು ಸಹ ಚಾಸಾ-1 ರವರಿಗೆ ಅವಾಚ್ಯವಾಗಿ ಬೈದಿದ್ದು, ಆ ಮೂಲಕ ನೀವು ಭಾರತೀಯ ದಂಡ ಸಂಹಿತೆಯ ಕಲಂ.**504** ಸಹಕಲಂ **34** ರ ರೀತ್ಯಾ ಅಪರಾಧವನ್ನು ನ್ಯಾಯಾಲಯದ ಸಂಜ್ಞಾನದಲ್ಲಿ ಮಾಡಿರುತ್ತೀರಿ.

ಮೇಲ್ಕಂಡ ಸ್ಥಳ, ದಿನಾಂಕ, ಮತ್ತು ಸಮಯದಲ್ಲಿ 1 ಮತ್ತು 3 ನೇ ಆರೋಪಿತರಾದ ನೀವು ಚಾಸಾ-1 ರವರಿಗೆ ಕೈಯಿಂದ ಮೈ- ಕೈಗೆ ಹೊಡೆದಿದ್ದು ಹಾಗೂ 2 ನೇ ಆರೋಪಿಯಾದ ನೀವು ಚಾಸಾ-1 ರವರಿಗೆ ಕಾಲಿನಿಂದ ಹೊಡೆದು ಸಾಮಾನ್ಯ ಸ್ವರೂಪದ ನೋವುಂಟು

ಮಾಡಿದ್ದು, ಆ ಮೂಲಕ ನೀವು ಭಾರತೀಯ ದಂಡ ಸಂಹಿತೆಯ ಕಲಂ.**323** ಸಹಕಲಂ **34** ರ ರೀತ್ಯಾ ಅಪರಾಧವನ್ನು ನ್ಯಾಯಾಲಯದ ಸಂಜ್ಞಾನದಲ್ಲಿ ಮಾಡಿರುತ್ತೀರಿ.

ಮೇಲ್ಕಂಡ ಸ್ಥಳ, ದಿನಾಂಕ, ಮತ್ತು ಸಮಯದಲ್ಲಿ 3 ನೇ ಆರೋಪಿಯಾದ ನೀವು ಚಾಸಾ-1 ರವರಿಗೆ ಕೈಯಿಂದ ಮೈಕೈಗೆ ಹೊಡೆದು ದೈಹಿಕವಾಗಿ ಹಾಗೂ ಮಾನಸಿಕವಾಗಿ ತೊಂದರೆ ಕೊಟ್ಟಿದ್ದು, ಆ ಮೂಲಕ ನೀವು ಭಾರತೀಯ ದಂಡ ಸಂಹಿತೆಯ ಕಲಂ.**498(ಎ)** ಸಹಕಲಂ **34** ರ ರೀತ್ಯಾ ಅಪರಾಧವನ್ನು ನ್ಯಾಯಾಲಯದ ಸಂಜ್ಞಾನದಲ್ಲಿ ಮಾಡಿರುತ್ತೀರಿ.

ಮೇಲ್ಕಂಡ ಸ್ಥಳ, ದಿನಾಂಕ, ಮತ್ತು ಸಮಯದಲ್ಲಿ 1 ನೇ ಆರೋಪಿಯಾದ ನೀವು ಚಾಸಾ-1 ರವರಿಗೆ ನಿನ್ನ ತಂದೆಯ ಬಳಿ ಹೋಗಿ ಹಣ ತೆಗೆದುಕೊಂಡು ಬಾ ಇಲ್ಲವಾದರೆ ನಿನ್ನನ್ನು ಈ ದಿನ ಕೊಲೆ ಮಾಡುತ್ತೇನೆಂದು ಕೊಲೆ ಬೆದರಿಕೆ ಹಾಕಿದ್ದು, ಆ ಮೂಲಕ ನೀವು ಭಾರತೀಯ ದಂಡ ಸಂಹಿತೆಯ ಕಲಂ.**506** ಸಹಕಲಂ **34** ರ ರೀತ್ಯಾ ಅಪರಾಧವನ್ನು ನ್ಯಾಯಾಲಯದ ಸಂಜ್ಞಾನದಲ್ಲಿ ಮಾಡಿರುತ್ತೀರಿ.

ಈ ಆರೋಪಗಳ ಮೇಲೆ ನೀವು ಈ ನ್ಯಾಯಾಲಯದ ಆರೋಪ ವಿಚಾರಣೆಗೆ ಗುರಿಯಾಗತಕ್ಕದ್ದೆಂದು ನಾನು ಈ ಮೂಲಕ ನಿರ್ದೇಶಿಸುತ್ತೇನೆ.

ದಿನಾಂಕಃ19.11.2024

Sd/-
ಹಿ. ಪ್ರಧಾನ ಪ್ರದನ್ಯಾದಂ, ತರೀಕೆರೆ.

ಪ್ರಃ 1) ನಿಮಗೆ ತಿಳಿಯುವಂತಹ ಭಾಷೆಯಲ್ಲಿ ಓದಿ ಹೇಳಲಾದ ಆರೋಪಣೆಯನ್ನು ನೀವು ಕೇಳಿ ತಿಳಿದುಕೊಂಡಿರುವಿರಾ?

ಉಃ ಎ-1

ಎ-2

ಎ-3

ಪ್ರಃ 2) ಸದರಿ ಆರೋಪಣೆಗಳನ್ನು ನೀವು ಒಪ್ಪಿಕೊಳ್ಳುತ್ತೀರಾ ಅಥವಾ ನಿರಾಕರಿಸುತ್ತೀರಾ?

ಉಃ ಎ-1

ಎ-2

ಎ-3

(ಆರೋಪವನ್ನು ಆರೋಪಿತರಿಗೆ ಓದಿ ಹೇಳಿ ಅವರು ಕೊಟ್ಟ ಉತ್ತರವನ್ನು ನಾನೇ ಸ್ವತಃ ಬರೆದುಕೊಂಡಿರುವುದು ನಿಜ ಮತ್ತು ಸತ್ಯವಾಗಿದೆ ಎಂದು ಈ ಮೂಲಕ ದೃಢೀಕರಿಸುತ್ತೇನೆ)

ದಿನಾಂಕಃ19.11.2024

Sd/-
ಹಿ. ಪ್ರಧಾನ ಪ್ರ.ದ.ನ್ಯಾ.ದಂ ತರೀಕೆರೆ.

ಆರೋಪಿತರ ಸಹಿಃ